# ಕರ್ನಾಟಕ ಸರ್ಕಾರ
# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# ಬೆಂಗಳೂರು

**ಸಂಖ್ಯೆ: ಇಡಿ/ಕೆಇಎ/27/ನೇ.ವಿ./2026(ಕೆಕೆ)** **ದಿನಾಂಕ: 10.07.2026**

## ಅಧಿಸೂಚನೆ

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ **ವಿವಿಧ ಜಿಲ್ಲೆಗಳಲ್ಲಿನ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದಲ್ಲಿ** ಖಾಲಿಯಿರುವ ಗ್ರೂಪ್-ಸಿ ವೃಂದದ **ಗ್ರಾಮ ಆಡಳಿತ ಅಧಿಕಾರಿ** ನೇರ ನೇಮಕಾತಿ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು. **ಜಿಲ್ಲಾವಾರು ಹುದ್ದೆಗಳ ವಿವರ ಕೆಳಕಂಡಂತಿವೆ.**

| ಕ್ರ.ಸಂ. | ಜಿಲ್ಲೆಯ ಹೆಸರು | ಹುದ್ದೆಗಳ ಸಂಖ್ಯೆ |
|---|---|---|
| **1.** | ಕಲಬುರಗಿ | 40 |
| **2.** | ಬೀದರ್ | 17 |
| **3.** | ರಾಯಚೂರು | 10 |
| | **ಒಟ್ಟು ಹುದ್ದೆಗಳ ಸಂಖ್ಯೆ** | **67** |

**(ಗಮನಿಸಿ: ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಸಂಬಂಧಪಟ್ಟ ಕಂದಾಯ ಇಲಾಖೆ / ಜಿಲ್ಲಾಧಿಕಾರಿಗಳು ನೀಡಿದಂತೆ ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ, ಮುಂದುವರೆದು, ಕಾಲಕಾಲಕ್ಕೆ ಸರ್ಕಾರ ಹೊರಡಿಸುವ ಆದೇಶಗಳಂತೆ ಸಂಬಂಧಪಟ್ಟ ಸಂಸ್ಥೆಗಳು ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳು ಪರಿಷ್ಕರಿಸಿ ಸಲ್ಲಿಸಿದ್ದಲ್ಲಿ, ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳು ಪರಿಷ್ಕರಣೆಗೆ ಒಳಪಟ್ಟಿರುತ್ತದೆ).**

**1. ಶೈಕ್ಷಣಿಕ ವಿದ್ಯಾರ್ಹತೆ:-**

| ಕ್ರ.ಸಂ. | ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| **1.** | ಗ್ರಾಮ ಆಡಳಿತ ಅಧಿಕಾರಿ | ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ.<br><br>• <u>ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ ಕುರಿತು:</u><br>**ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರಲ್ಲಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.**<br>1. ಸಿ.ಬಿ.ಎಸ್.ಇ ಮತ್ತು ಐ.ಸಿ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.<br>2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.<br>3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.<br>4. ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಭ್ಯರ್ಥಿಗಳು ಎನ್.ಐ.ಓ.ಎಸ್ ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿಗೆ ತತ್ಸಮಾನ.<br>**ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019, ದಿನಾಂಕ: 06.08.2021ರಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.**<br>ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿಯನ್ನು ಪಿ.ಯು.ಸಿಗೆ ತತ್ಸಮಾನವೆಂದು |

| | | |
|---|---|---|
| | | ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸುವುದು.<br>**ಸರ್ಕಾರದ ಆದೇಶ ಸಂಖ್ಯೆ: ಇಪಿ 33 ಟಿವಿಇ 2021, ದಿನಾಂಕ: 30.09.2021ರಲ್ಲಿ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.**<br>1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.<br>2. 2015 ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದು. |

**ಟಿಪ್ಪಣಿ:-**

a) ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ಸರ್ಕಾರ ಅಥವಾ ಪ್ರಾಧಿಕಾರಕ್ಕೆ ಅಥವಾ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಹೊಂದಿರಲೇಬೇಕು.** ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಎಲ್ಲಾ ಅಭ್ಯರ್ಥಿಗಳು ಅಂಕಪಟ್ಟಿ / ಸರ್ಟಿಫಿಕೇಟ್ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

c) ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ / ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು. ಒಂದು ವೇಳೆ ಹಾಜರು ಪಡಿಸದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

**ಸೂಚನೆ: ಮೇಲ್ಕಂಡ ಹುದ್ದೆಗೆ ನಿಗದಿ ಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿ ಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.**

**2. ವಯೋಮಿತಿ:-**

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ 29.01.2026 ರಲ್ಲಿ ಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಿದ್ದು, ಈ ಹಿನ್ನಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

| ವರ್ಗ | ನೇರ ನೇಮಕಾತಿ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 40 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳಿಗೆ | 43 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 ಅಭ್ಯರ್ಥಿಗಳಿಗೆ | 45 ವರ್ಷಗಳು |

- ಮುಂದುವರೆದು, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಈ ಕೆಳಗಿನ ಸಂದರ್ಭದಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ. | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಮತ್ತು ಕರ್ನಾಟಕ ರಾಜ್ಯ ಸರ್ಕಾರದ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |

| | | |
|---|---|---|
| | ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | |
| ಆ. | ಮಾಜಿ ಸೈನಿಕರಾಗಿದ್ದಲ್ಲಿ | ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. "ಮಾಜಿ ಯೋಧ" ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ |
| ಇ. | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ. | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ. | ವಿಶೇಷ ಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ. | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| ಋ. | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ನಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಸಕ್ಷಮ ಪ್ರಾಧಿಕಾರ ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| ಎ. | ಜೀತ ಕಾರ್ಮಿಕರಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾರೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು, ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

**3. ಅರ್ಜಿ ಸಲ್ಲಿಸುವ ವಿಧಾನ:-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ ನಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. **ಅಭ್ಯರ್ಥಿಗಳು ಕೇವಲ ಒಂದು ಜಿಲ್ಲೆಗೆ ಮಾತ್ರ ಅರ್ಜಿ ಸಲ್ಲಿಸಬೇಕು. ಒಂದಕ್ಕಿಂತ ಹೆಚ್ಚು ಜಿಲ್ಲೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ.** ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

**4. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **11.07.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **30.07.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **31.07.2026** |

ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರ / ಪ್ರಾಧಿಕಾರ / ಇಲಾಖೆ / ಸಂಸ್ಥೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

**5. ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ:**

i. **ಖಾಯಂಪೂರ್ವ ಅವಧಿ**: ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷಗಳ ಕಾಲ ಖಾಯಂಪೂರ್ವ ಅವಧಿಯಲ್ಲಿರುತ್ತಾರೆ.

ii. **ವೇತನ ಶ್ರೇಣಿ ರೂ.ಗಳಲ್ಲಿ:**

a) 34100-800-35700-900-39300-1000-43300-1125-47800-1250-52800-1375-58300-1500-64300-1650-67600 ಅನ್ವಯ.

**6. ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಕುರಿತು:**

ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಇರುತ್ತದೆ.

**7. ಶುಲ್ಕ:**

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| **ವಿವರಗಳು** | **ಶುಲ್ಕ** | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750/- (ರೂ.500 ಅರ್ಜಿ ಶುಲ್ಕ + 250 ಪ್ರಕ್ರಿಯೆ ಶುಲ್ಕ) | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯ ಲಿಂಗದ ಅಭ್ಯರ್ಥಿಗಳು | ರೂ. 500/- (ರೂ.250 ಅರ್ಜಿ ಶುಲ್ಕ + 250 ಪ್ರಕ್ರಿಯೆ ಶುಲ್ಕ) | |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ. 250/- (ಪ್ರಕ್ರಿಯೆ ಶುಲ್ಕ ಮಾತ್ರ) | |

**ಸೂಚನೆ:- ಶುಲ್ಕ ಪಾವತಿಸುವ ಮೊದಲು ಅಗತ್ಯವಿರುವ ಶೈಕ್ಷಣಿಕ ಅರ್ಹತೆ, ಮೀಸಲಾತಿ, ವಯೋಮಿತಿ ಹಾಗೂ ಇತರೆ ಎಲ್ಲಾ ಅರ್ಹತಾ ಷರತ್ತುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿಕೊಂಡು ಶುಲ್ಕವನ್ನು ಪಾವತಿ ಮಾಡತಕ್ಕದ್ದು.**

**8. ಪರೀಕ್ಷಾ ದಿನಾಂಕ:**

| **ಕನ್ನಡ ಭಾಷಾ ಪರೀಕ್ಷೆ** | ಪರೀಕ್ಷೆ ದಿನಾಂಕವನ್ನು ನಂತರ ತಿಳಿಸಲಾಗುವುದು |
|---|---|
| **ಪತ್ರಿಕೆ-1** | ದಿನಾಂಕ: 25.10.2026 - ಬೆಳಿಗ್ಗೆ 10.30 ರಿಂದ 12.30 ರವರೆಗೆ |
| **ಪತ್ರಿಕೆ-2** | ದಿನಾಂಕ: 25.10.2026 - ಮಧ್ಯಾಹ್ನ 2.30 ರಿಂದ 4.30 ರವರೆಗೆ |

**9. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

I. ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆಫ್‌ಲೈನ್-ಒಎಂಆರ್ ಮಾದರಿ (Offline-OMR type)** ಯಲ್ಲಿ ನಡೆಸಲಾಗುವುದು.

II. **ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುವ ಪರೀಕ್ಷಾ ಕೇಂದ್ರದ ವಿವರಗಳನ್ನು ನಂತರದಲ್ಲಿ ತಿಳಿಸಲಾಗುವುದು.** ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ

ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ)**

**10. ಕನ್ನಡ ಭಾಷಾ ಪರೀಕ್ಷೆ:**

ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಮತ್ತು ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಇಲ್ಲವಾದಲ್ಲಿ, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿದ್ದು, ಗರಿಷ್ಠ 150 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ 50 ಅಂಕಗಳನ್ನು ಗಳಿಸತಕ್ಕದ್ದು. **ಗೈರು ಹಾಜರಾದ / ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅರ್ಹರಾಗುವುದಿಲ್ಲ**. ಈ ಪ್ರಶ್ನೆಪತ್ರಿಕೆಯನ್ನು ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಜ್ಯೇಷ್ಠತೆಗೆ ಅಥವಾ ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ.

**11. ಪ್ರಶ್ನೆ ಪತ್ರಿಕೆ ಹಾಗೂ ಪಠ್ಯಕ್ರಮ:**

| ಪತ್ರಿಕೆ / Paper | ವಿಷಯ / Subject | ಒಟ್ಟು ಪ್ರಶ್ನೆಗಳು / Total Questions | ಗರಿಷ್ಠ ಅಂಕಗಳು / Total Marks | ಅವಧಿ / Duration (ಗಂಟೆ / Hours) |
|---|---|---|---|---|
| **ಪತ್ರಿಕೆ-1** | **ಸಾಮಾನ್ಯ ಜ್ಞಾನ**:- (ಎ). ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು; (ಬಿ). ದೈನಂದಿನ ಗ್ರಹಿಕೆಯ ವಿಷಯಗಳು; (ಸಿ). ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು; (ಡಿ). ವಿಶೇಷವಾಗಿ ಕರ್ನಾಟಕಕ್ಕೆ ಸಂಬಂಧಿಸಿದ ಭಾರತದ ಇತಿಹಾಸ; (ಇ) ಕರ್ನಾಟಕಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು; (ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು; (ಜಿ). ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪ ಕ್ರಮಗಳನ್ನು ಒಳಗೊಂಡಂತೆ ಕರ್ನಾಟಕದ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು; (ಎಚ್). ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು. | 100 | 100 | 2 ಗಂಟೆ |
| **ಪತ್ರಿಕೆ-2** | (ಎ). ಸಾಮಾನ್ಯ ಕನ್ನಡ; (ಬಿ). ಸಾಮಾನ್ಯ ಇಂಗ್ಲೀಷ್; (ಸಿ). ಕಂಪ್ಯೂಟರ್ ಜ್ಞಾನ. | 100 | 100 | 2 ಗಂಟೆ |

**ಸೂಚನೆ:**

**ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಯು ಅರ್ಹತೆಗಾಗಿ ಕನಿಷ್ಠ ಶೇ. 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ**. ಕನಿಷ್ಠ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ.

**12. ಋಣಾತ್ಮಕ ಮೌಲ್ಯಮಾಪನ(Negative Valuation):**

i. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು, ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು 0.25 ಅಂಕಗಳನ್ನು ಕಳೆಯಲಾಗುವುದು.

ii. ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ 0.25 ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

**13. ನೇಮಕಾತಿ:**

**i.** ಗ್ರಾಮ ಆಡಳಿತ ಅಧಿಕಾರಿ ಹುದ್ದೆಯು ಜಿಲ್ಲಾ ಮಟ್ಟದ ಜೇಷ್ಠತೆಯನ್ನು ಹೊಂದಿದ್ದು, ಸಂಬಂಧಪಟ್ಟ ಜಿಲ್ಲಾಧಿಕಾರಿಯವರು ಸಕ್ಷಮ ಪ್ರಾಧಿಕಾರ ಹಾಗೂ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಆಗಿರುತ್ತಾರೆ.

ii. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಪ್ರತ್ಯೇಕವಾಗಿ ಜಿಲ್ಲಾವಾರು ಅಭ್ಯರ್ಥಿಗಳ ಅರ್ಹತಾ ಪಟ್ಟಿ / ಅಂಕಪಟ್ಟಿಯನ್ನು ಸರ್ಕಾರಕ್ಕೆ ಹಸ್ತಾಂತರಿಸಲಾಗುವುದು. ಅದರಂತೆ ಸರ್ಕಾರವು ಅಭ್ಯರ್ಥಿಗಳ ಅರ್ಹತಾ ಪಟ್ಟಿ / ಅಂಕಪಟ್ಟಿಯನ್ನು ಜಿಲ್ಲಾವಾರು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಕಳುಹಿಸಲಾಗುವುದು ಹಾಗೂ ಜಿಲ್ಲಾಧಿಕಾರಿಗಳು ಮುಂದಿನ ನೇಮಕಾತಿ ಪ್ರಕ್ರಿಯೆಯನ್ನು ನಿಯಮಾನುಸಾರ ಕೈಗೊಳ್ಳುತ್ತಾರೆ.

**14. ಅರ್ಹತಾ ಷರತ್ತುಗಳು:**

i. ಭಾರತೀಯ ನಾಗರಿಕನಾಗಿರತಕ್ಕದ್ದು.

ii. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

iv. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

v. ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

vi. **ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.**

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**15. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಕೋರಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು;

1. ಪರಿಶಿಷ್ಟ ಜಾತಿ(**ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಪ್ರಮಾಣ ಪತ್ರವನ್ನು ಪಡೆದು, ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸತಕ್ಕದ್ದು**) ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ 'ಡಿ';
2. ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ 'ಇ';
3. ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - ನಮೂನೆ 'ಎಫ್'.

ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. **ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ**).
**ವಿಶೇಷ ಸೂಚನೆ**:- ಸರ್ಕಾರದ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರನ್ವಯ ಬಲಿಜ ಮತ್ತು ಉಪ ಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗ ಬಲಿಜ / ತೆಲಗ ಬಣಜಿಗ / ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ / ಬಣಜಿಗ ಶೆಟ್ಟಿ, ದಾಸರ ಬಲಿಜ / ದಾಸರ ಬಲಜಿಗ / ದಾಸರ ಬಣಜಿಗ / ದಾಸಬಣಜಿಗ, ಕಸ್ಬನ್, ಮುನ್ನೂರ / ಮುನ್ನಾರ್ / ಮುನ್ನೂಕಾರ್ಪು, ಬಳಿಗಾರ / ಬಳೆ ಬಣಜಿಗ / ಬಳೆಬಲಜಿಗ / ಬಳಿ ಜೆಟ್ಟಿ / ಬಣಗಾರ, ರೆಡ್ಡಿ(ಬಲಿಜ), ಜನಪ್ಪನ್, ಉಪ್ಪಾರ(ಬಲಿಜ), ತುಲೇರು(ಬಲಿಜ) ಉಪ ಜಾತಿಗಳನ್ನು ಶಿಕ್ಷಣದ ಸಲುವಾಗಿ 2ಎ ಮೀಸಲಾತಿಯಡಿ ಹಾಗೂ ಉದ್ಯೋಗದ ಸಲುವಾಗಿ 3ಎ ಮೀಸಲಾತಿಯಡಿ ಪರಿಗಣಿಲಾಗಿದೆ. ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ / ಉಪಜಾತಿಯ ಅಭ್ಯರ್ಥಿಗಳು ಉದ್ಯೋಗದಲ್ಲಿನ ಮೀಸಲಾತಿಗಾಗಿ ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ 3ಎ ಮೀಸಲಾತಿ ಕೋರತಕ್ಕದ್ದು ಹಾಗೂ ಶಿಕ್ಷಣದ ಸಲುವಾಗಿ ಪಡೆದ 2ಎ ಮೀಸಲಾತಿ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ.
(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು).

**16. ಮಾಜಿ ಸೈನಿಕ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡಾ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಿಡಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

3. ಅ). ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು;

ಅಥವಾ

ಆ). ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು

ಅಥವಾ

ಇ). ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿಗಳು:

ಅಥವಾ

ಈ). ತಮ್ಮ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿಗಳು ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿಗಳು ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.
ii. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿಗಳು.
iii. ಶೌರ್ಯ (ಗ್ಯಾಲಂಟ್ರಿ) ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ.

**ವಿವರಣೆ**: ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು / ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

**17. ಗ್ರಾಮೀಣ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇನೆನಿ 2001 ದಿನಾಂಕ 13-02-2001 ರನ್ವಯ ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ

ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

**18. ಕನ್ನಡ ಮಾಧ್ಯಮ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನೆನಿ 2001 ದಿನಾಂಕ 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

**19. ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು;**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ 23.11.2000 ಮತ್ತು ತಿದ್ದುಪಡಿ ಆದೇಶ ಸಂಖ್ಯೆ ಸಿಆಸುಇ 252 ಸೆನೆನಿ 2020 (ಭಾಗ-1), ದಿನಾಂಕ 07.07.2021. ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

**20. ವಿಶೇಷ ಚೇತನ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/149/ಎಸ್‌ಆರ್‌ಆರ್/2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಗ್ರೂಪ್-ಬಿ ಹುದ್ದೆಗಳಿಗೆ ಶೇ.4 ರಷ್ಟು ಮತ್ತು ಗ್ರೂಪ್-ಸಿ ಹುದ್ದೆಗಳಿಗೆ ಶೇ. 5 ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: WCD 213 PHP 2023, ದಿನಾಂಕ: 06.02.2024 ರಂತೆ ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು(**ಅಂಧತ್ವ ಮತ್ತು ಮಂದ ದೃಷ್ಟಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುವುದಿಲ್ಲ**). ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನೆನಿ/2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರ/ UDID ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ಹಾಗೂ ನೇಮಕಾತಿ ಪ್ರಾಧಿಕಾರಗಳು ನಡೆಸುವ ವೈದ್ಯಕೀಯ ಮಂಡಳಿ ಪರಿಶೀಲನೆಗೆ ಹಾಜರಾಗಿ ನಿಯಮಾನುಸಾರ ಅರ್ಹತೆಗಳಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**21. ತೃತೀಯ ಲಿಂಗದ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸೇನೆನಿ 2020 ದಿನಾಂಕ: 06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡಾ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**22. ಅನುಚ್ಛೇಧ 371(ಜೆ) ರಂತೆ ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಸದರಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ. (ಈ ಪ್ರಮಾಣ ಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ). ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

**23. ಪ್ರಾಧಿಕಾರದೊಡನೆ ಪತ್ರ ವ್ಯವಹಾರ;**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**24. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಕಲ್ಯಾಣ-ಕರ್ನಾಟಕ

ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.

1. ಆಧಾರ್‌ಕಾರ್ಡ್
2. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ / ವಿದ್ಯಾರ್ಹತೆಯ ಎಲ್ಲಾ ವಿಷಯಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disbaled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಗದಿತ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ನಮೂನೆ-1 ರಲ್ಲಿ ಮಾತ್ರ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯ ಲಿಂಗದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)
9. ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು(ನಿಗದಿಪಡಿಸಿದ್ದಲ್ಲಿ).

**25. ವಿಶೇಷ ಸೂಚನೆಗಳು:**

I. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.

II. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

III. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ / ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅವರನ್ನು ಅನರ್ಹಗೊಳಿಸಲಾಗುವುದು.

IV. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್‌ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

V. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

VI. ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

VII. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

VIII. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

IX. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೇ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

**26. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: ಮಾಹಿತಿ ಕೇಂದ್ರ - 080-23460460. (10.00 AM to 6.00 PM)

**27. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವರೆಂದು, ಕಂಡುಬಂದಲ್ಲಿ ಅವರು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಗಮನಿಸಿ:-**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿಗಳು ಮತ್ತು ಕರ್ನಾಟಕ ರಾಜ್ಯ ಕಂದಾಯ ಸೇವೆಗಳು(ವೃಂದ ಮತ್ತು ನೇಮಕಾತಿ ನಿಯಮಗಳು), 2026 ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ. | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ. | ಪರಿಶಿಷ್ಟ ಜಾತಿ | SC | Scheduled Caste |

| | | | |
|---|---|---|---|
| (ಪ್ರ-ಎ)<br>(ಪ್ರ-ಬಿ)<br>(ಪ್ರ-ಸಿ) | (ಪ್ರವರ್ಗ-ಎ)<br>(ಪ್ರವರ್ಗ-ಬಿ)<br>(ಪ್ರವರ್ಗ-ಸಿ) | (Cat-A)<br>(Cat -B)<br>(Cat -C) | (Category -A)<br>(Category -B)<br>(Category -C) |
| ಪ.ಪಂ. | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat–1 | Category–1 |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ. | ಮಾಜಿ ಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |
| ತೃ.ಲಿ. | ತೃತೀಯ ಲಿಂಗ | TG | Transgender |
| ಕೆ.ಕೆ. | ಕಲ್ಯಾಣ-ಕರ್ನಾಟಕ | KK | Kalyana Karnataka |

**ಕಾರ್ಯನಿರ್ವಾಹಕ ನಿರ್ದೇಶಕರು,**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಸೂಚನೆ**: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.